ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಬುಧವಾರ, ದಿನಾಂಕ : 03 ನೇ ಫೆಬ್ರುವರಿ, 2021

ಫಸಲ್ ಭೀಮಾ ಯೋಜನೆ ಕುರಿತ ಮಾಹಿತಿ

ಶ್ರೀಕೆ.ಹರೀಶ್ ಕುಮಾರ್(ವಿಧಾನಸಭೆಯಿಂದ ಚುನಾಯಿತರಾದವರು):-

251 (332) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಫಸಲ್ ಭೀಮಾ ಯೋಜನೆಯು ರೈತರಿಗೆ ವಿಮೆ ನೀಡುವಲ್ಲಿ ಸಂಪೂರ್ಣ ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಫಸಲ್ ಭೀಮಾ ಯೋಜನೆಯಲ್ಲಿ ರೈತರಿಗಿಂತ ವಿಮಾ ಕಂಪನಿಗಳೆ ಹೆಚ್ಚು ಲಾಭ ಮಾಡಿಕೊಂಡಿದ್ದು, ಯೋಜನೆಯ ಕ್ಲೇಮ್ ನೀಡಲು ಕಠಿಣ ಷರತ್ತುಗಳು ತಾಂತ್ರಿಕ ಸಮಸ್ಯೆ ಜಾಗೃತಿಯ ಕೊರತೆ ಮತ್ತು ಅಡ್ಡಿಗಳ ಕಾರಣಗಳಿಂದ ಸದರಿ ಯೋಜನೆಯು ದುರ್ಬಲವಾಗಿದ್ದು, ಯೋಜನೆಯ ಯಶಸ್ಸಿನ ನಿರೀಕ್ಷಿತ ಮಟ್ಟವನ್ನು ತಲುಪದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಸದರಿ ಯೋಜನೆಯನ್ನು ಯಶಸ್ವಿಗೊಳಿಸಿ ಪರಿಮಣಾಕಾರಿಯಾಗಿ ಜಾರಿಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)